ಹರಾಜು ಪೂರೈಸಿದ ವಡನೆ ಛಡಸವಾಲ್‌ದಾರನು ಹರಾಜು ಮೊಬಲಗಿಗೆ ಶೇಕಡಾ 25 ರೂಪಾಯಿಮೇರಿಗೆ ತೇವಣಿ ಇಡಬೇಕು, ಡೆಪ್ಯುಟಿ ಕಮ್ಮಿಷನರ್ ಸಾಹೇಬರವರಿಂದ ಮಂಜೂರ್ಮಾಡಲ್ಪಟ್ಟ ಸಂಗತಿ ತಿಳಿಸಲ್ಪಟ್ಟ ವಡನೆ ಬಾಕಿ ಮೊಬಲಗನ್ನು ಹರಾಜ್ ಮೊಬಲಗಿಗೆ ರೂಪಾಯಿ ವಂದಕ್ಕೆ ವಂದಾಣೆ ಮೇರಿಗೆ ಲೋಕಲ್ ಸೆಸ್ ಸಹಿತ ಪಾವತಿ ಮಾಡಬೇಕು. ಅಥವಾ ಆಮಲ್‌ದಾರರಿಂದ ಮೊಕರರ್ ಮಾಡಲ್ಪಡುವ ಖಿಸ್ತುಗಳ ಪ್ರಕಾರ ಪಾವತೀ ಮಾಡಲು ಬದ್ಧನಾಗಿ ಕ್ರಮಪ್ರಕಾರ ಮುಚ್ಚಳಿಕೆಯನ್ನು ಮತ್ತು ಖಾತರ್ ಜಾಮೀನಿಯನ್ನು ಸಹಾ ಕೊಡಬೇಕು; ಮೇಲ್ಕಂಡ ಷರತ್ತುಗಳ ಪೈಕಿ ಯಾವದಕ್ಕೆ ತಪ್ಪಿದಾಗ್ಯೂ ಸದರೀ ಬಾಬುಗಳು ಪುನಃ ಹರಾಜ್ ಮಾಡಲ್ಪಡುವದು. ಲುಕ್ಸಾನ್ ಮೊಬಲಗು ತಪ್ಪಿದ ಛಡಸವಾಲ್‌ದಾರನಿಂದ ರೆವಿನ್ಯೂ ಕಂದಾಯದ ಬಾಕಿಯಂತೆ ವಸೂಲ್ಮಾಡಲ್ಪಡುವದು.

ಈ ಹರಾಜ್ ವಿಷಯದಲ್ಲಿ ಇನ್ನು ಯೇನಾಪರು ಹೆಚ್ಚು ತಪಶೀಲು ತಿಳಿದುಕೊಳ್ಳಲು ಅಪೇಕ್ಷೆವುಳ್ಳವರು ಆಮಿಲರಿಂದ ತಿಳಿದುಕೊಳ್ಳ ಬಹುದು.

ಜಿ. ರಘುನಾಥ ರಾವ್,
ಫಾರ್ ಡೆ॥ ಕಮ್ಮಿಷನರ್.

ತುಮಕೂರು ಡಿಸ್ಟ್ರಿಕ್ಟ್ ಸಬಾರ್ಡಿನೇಟ್ ಜಡ್ಜೀಯವರ ಕೋರ್ಟ್‌ನಲ್ಲಿ.

ದಿವಾಳಿಯಾದ ಡಿಕ್ರಿ ದೇಣೇದಾರ ಶೀರಾ ತಾ॥ ಹಂದಿಕುಂಟೆಯಲ್ಲಿರುವ ಶಾನುಭಾಗ ವೆಂಕಟ್ರಾಮಯ್ಯನ ವಿಷಯದಲ್ಲಿ—

ಸ್ ಱ 1884ನೇ ಇಸವಿ ದಿವಾಳಿ ವ್ಯಾಜ್ಯ ನಂಬರು 3.

ಹುಕ್ಕುಂ.

ಮೇಲ್ಕಂಡ ಶಾನುಭಾಗ ವೆಂಕಟ್ರಾಮಯ್ಯ ಖುಲಾಸೆಯಾಗಬೇಕೆಂದು ಕೋರಿ ಬರದುಕೊಂಡ ಅರ್ಜಿಯು ಮೆಸ್ಸರ್ ಸಿ. ಕ್ರೈಸ್ ಸಾಹೇಬರ ರೂಬರೂ ಅರ್ಜಿದಾರನ ಪರವಾಗಿ ಇವನ ಸಮಕ್ಷಮದಲ್ಲಿಯೂ ಮತ್ತು ಐರ್ಜ ಅರ್ಜಿದಾರನ ಲೇಣೇದಾರರಾದವರ ಪೈಕಿ ಶಿರಾ ತಾಲ್ಲೂಕು ಕಲ್ಲಹಳ್ಳಿ ಮುದ್ದೇಗವುಡನ ಯದುರಾಗಿಯೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದಿಸಲ್ಪಡುವ ಲೇಣೇದಾರ್‌ರಿಗೆ ಈ ದರ್ಯಾಫ್ತಿ ನೋಟೀಸ್ ಜಾರಿಯಾಗಿದ್ದಾಗ್ಯೂ ತಾವೆ ಖುದ್ದಾಗಿಯಾಗಲಿ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿ ಹೋದರು, ಯಾರೆಂದರೆ—ಮಡಿಕಶೀರಾ ತಾಲ್ಲೂಕು ಗುಡಿಬಂಡೇಲಿರುವ ಭೋಜಪ್ಪ.

ಸದರೀ ಶಾನುಭಾಗ ವೆಂಕಟರಾಮಯ್ಯನು ದೀವಾಳಿಯಾದವನೆಂದೆನ್ನು ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದಲ್ಲಿನ ನಿರೂಪಣೆಗಳ ಫಲವನ್ನು ಹೊಂದುವದಕ್ಕೆ ಹಕ್ಕುದಾರನಾಗಿರುತ್ತಾನೆಂದು ಇದರಿಂದ ತೀರ್ಮಾನಿಸಲ್ಪಟ್ಟಿರುತ್ತದೆ. ಈ ಕೋರ್ಟು ನಾಜರು ಐರ್ಜ ದಿವ್ಹಾಳಿಯಾದವನ ಪೈಂದಗಿಗೆ ರಿಸೀವರಾಗಿ ಮೊಕರರ್ಮಾಡಲ್ಪಡತಕ್ಕದ್ದೆಂದುನ್ನು ಸದರೀ ರಿಸೀವರಾದವನು ವಡನೆ ದಿವಾಳಿಯಾದವನ ಪೈಂಧಗಿಗೂ ಜವಾಬ್ ಮಾಡತಕ್ಕ ಬಗ್ಯೂನಿಗೇಪಾನಿ ಮಾಡತಕ್ಕ ಬಗ್ಯೂ ಸಹ ತನ್ನ ರಿಸೀವರ ಕೆಲಸಗಳಿಗೆ ವುದ್ಯುಕ್ತಪಡತಕ್ಕದ್ದೆಂದುನ್ನು ಮತ್ತು ಸದರೀ ರಿಸೀವರನು ತಾನು ನಡಿಸಿದ ಕೆಲಸಗಳ ಪ್ರತಿ ಫಲಕ್ಕಾಗಿ ದಿವಾಳಿಯಾದವನ ಲೇಣೇದಾರರಿಗೆ ಬಟವಾಡೆ ಮಾಡಬೇಕೆಂದು ಸಹ ಹುಕ್ಕುಂ ಮಾಡಲ್ಪಟ್ಟು ಇದೆ.

ಸ್ ಱ 1884ನೇ ಇಸವಿ ಮಾರ್ಚೀ 27ನೇ ತಾರೀಖಿನಲ್ಲು ಕೋರ್ಟು ಮೊಹರ್ ನಮ್ಮ ದಸ್ತಖತ್ತು ನಿಸಿ ಕೊಡಲ್ಪಟ್ಟಿತು.

ಸಿ. ಕ್ರೈಸ್,
ಸಬ್-ಜಡ್ಜ.

ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜೀಯವರ ಕೋರ್ಟ್‌ನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 130.

ವೃತಪಟ್ಟ ಪರಮೇಶ್ವರಶಟ್ಟಿ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಹೊನ್ನಪ್ಪ ವೃತಪಟ್ಟ ಸದರೀ ಪರಮೇಶ್ವರಶಟ್ಟಿಗೆ ಹಿರೇ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ನಾಗಮಂಗಲ ತಾ॥ ನೆಲ್ಲೀಗೆರೆ ಹೋಬಳಿ ಬೆಳ್ಳೂರು ಸ್ಥಳದ ಸದರೀ ಹೊನ್ನಪ್ಪನು, ಸದರೀ ವಾಸಸ್ಥನಾಗಿ ವೃತಪಟ್ಟ ಪರಮೇಶ್ವರಶಟ್ಟಿ ಜಿಂದಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಹೊನ್ನಪ್ಪನ ಅರ್ಜಿಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು ೧೭ರಲ್ಲು ಮೈಸೂರು ಮೊಕ್ಕಾಮಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವ್ಯತಪಟ್ಟ ಪರಮೇಶ್ವರಶೆಟ್ಟಿ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವೀ ಅರ್ಜೀ ನಂಬರ್ 136.

ವ್ಯತಪಟ್ಟ ಖಾಜಿ ಸೈದ್ ಅಹಮ್ಮದ್ ಸಾಬನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಖಾಜಿ ಸೈದ್ ನಸರಹುಸ್ಸೇನ್‌ಸಾಬಿ, ವ್ಯತಪಟ್ಟ ಸದರೀ ಖಾಜಿಸೈದ್ ಅಹಮ್ಮದ್ ಸಾಬರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಸ್ಥಳದ ಸದರೀ ಖಾಜಿಸೈದ್ ನಸರಹುಸ್ಸೇನ್ ಸಾಬಿ, ಸದರೀ ವಾಸಸ್ಥನಾಗಿ ವ್ಯತಪಟ್ಟ ಖಾಜಿ ಸೈದ್ ಅಹಮ್ಮದ್ ಸಾಬಿ ಜೆಂದಗೀ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಖಾಜಿಸೈದ್ ನಸರಹುಸ್ಸೇನ್‌ಸಾಬಿ ಅರ್ಜೀಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು 24ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವ್ಯತಪಟ್ಟ ಖಾಜಿಸೈದ್ ಅಹಮ್ಮದ ಸಾಬರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರಿರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಏಪ್ರಿಲ್ ತಿಂಗಳು 3ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮದಸ್ತಖತ್ತೊಡನೆ ಕೊಡೋಣಾಗಿದೆ.

ವಿ. ಎ. ನರಸಿಹ್ಮಯ್ಯಂಗಾರ್,
ಡಿಸ್ಟ್ರಿಕ್ಟು ಜಡ್ಜ್.

ಇಸ್ತಿಹಾರ್ ನಾಮಾ.

ತಾರೀಖು 3ನೇ ಮಾರ್ಚೀ 1884.

ಇದರಿಂದ ಪ್ರಕಟಪಡಿಸುವದೇನಂದರೆ, ಚಾಮರಾಜನಗರ ತಾಲ್ಲೂಕಿನಲ್ಲಿ ಖೆಡ್ಡಾಯಾನೆ ಆನೆಗಳನ್ನು ಹಿಡಿಯತಕ್ಕ ಕೆಲಸ ನಡಿಸಲ್ಪಡುವದರಿಂದ ಸಾಲ್ ಮಜಕೂರ್ ಮೇ 1ನೇ ಮಕ್ಕಂ ಲಾಗಾಯತು ಆಗಸ್ಟು 31ನೇ ಮಕ್ಕಂವರಿಗೆ, ಚಾಮರಾಜನಗರಕ್ಕೂ, ಹುಣಸೂರಿಗೂ, ಮಧ್ಯದಲ್ಲಿರುವ ಸರ್ಕಾರದ ರಸ್ತೆಗೆ ಪೂರ್ವ ದಿಕ್ಕಿನಲ್ಲಿರುವ ಯಾವ ಡಿಸ್ಟ್ರಿಕ್ಟು ಜಂಗ್ಲಿ ಯಲ್ಲಾಗಲಿ ಷಿಕಾರಿ ಆಡುವ ಬಗ್ಯೆ ಅಪ್ಪಣೆ ಕೊಡಲ್ಪಡುವದಿಲ್ಲವೆಂತ.

ಎ. ಕುಪ್ಪುಸಾಮಿ ಮೊದಲಿಯಾರ್,
ಫಾರ್ ಡೆಪ್ಯೂಟಿ ಕಮ್ಮಿಷನರ್.

ಕಡೂರು ಡಿಸ್ಟ್ರಿಕ್ಟು.

ತಾರೀಖು 26ನೇ ಮಾರ್ಚೀ 1884.

ಇದರಿಂದ ತಿಳಿಯಪಡಿಸುವದೇನಂದರೆ, ಮೊಡಿಗೆರೇ ತಾಲ್ಲೂಕು ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಬೇವಾರಸಾಗಿ ಯಿರತಕ್ಕ ಕೆಳಗೆ ವಿವರಿಸೋಣಾದ ದಸ್ತಾವೇಜನ್ನು ಹಾಜರ್ ಮಾಡಿದವರೇ ಆಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವರಿಂದ ಕ್ರಮವಾದ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರರೆ ಆಗಲಿ ಈ ನೋಟೀಸ್ ತಾರೀಖು ಲಾಗಾಯತು ವರ್ಷ ತಿಂಗಳ ಒಳಗಾಗಿ ಸಬ್ ರಿಜಿಸ್ಟ್ರಾರ್ ರೂಬರೂಲು ಹಾಜರಾಗಿ ಅದನ್ನ ವಾಪಸು ತೆಗದುಕೊಳ್ಳಬೇಕು. ತಪ್ಪಿದರೆ ಸ॥ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಅನುಸರಿಸಿ, ಅದು ನಾಪಸಡಿಸಲ್ಪಡುವದು.